**ದಿನಾಂಕ: 05–02–2022 ರಂದು ಸಮಯ 10.30 ಗಂಟೆಗೆ ವಾರ್ಡ್ 154–ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ , ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ಬಾಲಕೃಷ್ಣ. ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–154.
5. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷಕರು, ವಾರ್ಡ್ 154
6. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್–154
7. ಶ್ರೀ.ಸದಾನಂದ, ಪೋಲೀಸ್ ಬಸವನಗುಡಿ ಸಂಚಾರಿ ಠಾಣೆ
8. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ನಾಗಸಂದ್ರ ಸಾಯಿಬಾಬಾ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆಯವರು ಸ್ಯಾನಿಟರಿ/ನೀರು ಸರಬರಾಜಿಗಾಗಿ ಅಗೆದಿರುವ ಭಾಗವನ್ನು ಮುಚ್ಚಲು ಸಾರ್ವಜನೀಕರಿಂದ ದೂರು ಬಂದಿರುವುದರಿಂದ ಸದರಿ ಅಗೆದಿರುವ ಭಾಗಗಳನ್ನು ತುರ್ತಾಗಿ ಮುಚ್ಚಲು ಸಮಬಂಧಪಟ್ಟವರಿಗೆ ಸೂಚಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ ರವರಿಗೆ ಕ್ರಮ ವಹಿಸಲು**
**ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಬಿ.ಎಂ.ಎಸ್ ಹೊಸ್ಟೆಲ್ ಹಿಂಭಾಗದಲ್ಲಿರುವ ರಸ್ತೆಯಲ್ಲಿ ಬೃಹತ್ ಮಳೆನೀರುಗಾಲುವೆಯ ಚಪ್ಪಡಿಕಲ್ಲು ಮುರಿದಿರುವುದರಿಂದ ದುವಾಸನೆ ಬರುತ್ತಿದ್ದು ಸದರಿ ಚಪ್ಪಡಿ ಕಲ್ಲನ್ನು ಮುಚ್ಚಲು ಕ್ರಮವಹಿಸಲು ಸಮಬಂಧಪಟ್ಟವರಿಗೆ ಸೂಚಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬೃಹತ್ ನೀರುಗಾಲುವೆ (ದಕ್ಷಿಣ) ರವರಿಗೆ ಕ್ರಮ ವಹಿಸಲು**
**ಸೂಚಿಸಿರುತ್ತಾರೆ.**

>>>>2

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಪಾಲಿಕೆಯ ಕಟ್ಟಡಗಳನ್ನು ಗುರುತಿಸಿ ಪಟ್ಟಿಮಾಡಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: - ಕಂದಾಯ ಪರಿವೀಕ್ಷಕರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಕಸದ ಬ್ಲಾಕ್ ಸ್ಪಾಟ್ ಗಳನ್ನು ಕಡಿಮೆಮಾಡಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: - ಹಿರಿಯ ಆರೋಗ್ಯ ಪರಿವೀಕ್ಷಕರು,**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

2ನೇ ಮುಖ್ಯ ರಸ್ತೆ ಎನ್.ಆರ್ ಕಾಲೋನಿಯಲ್ಲಿ ಬಿ.ಡಬ್ಲ್ಯು.ಎಸ್.ಎಸ್.ಬಿ. ಇಲಾಖೆಯವರು ಒಳಚರಂಡಿ ಪೈಪ್ ಅಳವಡಿಸಲು ರಸ್ತೆಯನ್ನು ಅಗೆದಿದ್ದು ಇದನ್ನು ಸರಿಪಡಿಸಲು ಸಂಬಂಧಪಟ್ಟವರಿಗೆ ಸೂಚಿಸಲು ಕ್ರಮ ವಹಿಸಲು ನೋಡಲ್ ಅಧಿಕಾರಿಯವರು ಸೂಚಿಸಿದರು.

**ಕ್ರಮ: - ಕ್ರಮ: - ಸಹಾಯಕ ಅಭಿಯಂತರರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

AE 154 5/2

05/2

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154-ಬಸವನಗುಡಿ

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.